## 54. ಮಾಸ್ಕ್ ಧರಿಸದಿದ್ದರೆ ದಂಡ ಪ್ರಯೋಗ

ಮುಖಗವಸು ಕಡ್ಡಾಯಗೊಳಿಸಿದರೂ ಸರಿಯಾಗಿ ಪಾಲಿಸದ ಹಿನ್ನೆಲೆಯಲ್ಲಿ ಬಿಬಿಎಂಪಿ ಭಾರಿ 'ದಂಡ ಪ್ರಯೋಗ'ಕ್ಕೆ ನಿರ್ಧರಿಸಿದ್ದು, ಕನಿಷ್ಠ ಸಾವಿರದಿಂದ ಗರಿಷ್ಠ ರೂ. 2 ಸಾವಿರವರೆಗೆ ದಂಡ ಬೀಳಲಿದೆ.

ಹೆಚ್ಚುತ್ತಿರುವ ಸೋಂಕು ತಡೆಗೆ ಪಾಲಿಕೆ ಈ ಕ್ರಮಕ್ಕೆ ಮುಂದಾಗಿದ್ದು, ಸಾರ್ವಜನಿಕ ಸ್ಥಳಗಳಲ್ಲಿ ಮುಖಗವಸು (ಮಾಸ್ಕ್) ಧರಿಸದೆ ಓಡಾಡುವವರ ವಿರುದ್ಧ ರೂ. 1 ಸಾವಿರ ದಂಡ ವಿಧಿಸಲಾಗುವುದು. ಅದೇ ವ್ಯಕ್ತಿಯಿಂದ ಸತತ ಎರಡನೇ ಬಾರಿಯೂ ಈ ತಪ್ಪು ಪುನರಾವರ್ತನೆಯಾದರೆ, ರೂ.2 ಸಾವಿರ ವಿಧಿಸಲಾಗುವುದು. ಮೂರನೇ ಬಾರಿಗೆ ಶಿಕ್ಷೆ ವಿಧಿಸುವ ಬಗ್ಗೆಯೂ ಉದ್ದೇಶಿಸಲಾಗಿದೆ.

ಈ ನಿಯಮ ಜಾರಿಗೆ ಬರಲಿದ್ದು, ಈ ಸಂಬಂಧ ಅಧಿಕೃತ ಆದೇಶ ಹೊರಬೀಳುವ ಸಾಧ್ಯತೆ ಇದೆ. ನಿಯಮ ಪಾಲನೆ ಹಾಗೂ ತಪ್ಪಿತಸ್ಥರ ಮೇಲೆ ದಂಡ ಪ್ರಯೋಗಕ್ಕೆ ಈಗಾಗಲೇ ಪಾಲಿಕೆ ವ್ಯಾಪ್ತಿಯಲ್ಲಿರುವ ಮಾರ್ಷಲ್‌ಗಳನ್ನು ಬಳಸಿಕೊಳ್ಳಲು ನಿರ್ಧರಿಸಲಾಗಿದೆ ಎಂದು ಪಾಲಿಕೆ ಅಧಿಕಾರಿಗಳು ತಿಳಿಸಿದ್ದಾರೆ.

**ವಾಹನಗಳ ಬಿಡುಗಡಗೆ ಕೋರ್ಟ್ ಸೂಚನೆ:** ಲಾಕ್‌ಡೌನ್ ಆದೇಶ ಉಲ್ಲಂಘಿಸಿ ರಸ್ತೆಗಿಳಿದಿದ್ದ ಹಿನ್ನೆಲೆಯಲ್ಲಿ ಜಪ್ತಿ ಮಾಡಲಾಗಿದ್ದ ವಾಹನಗಳನ್ನು ದಂಡ ವಿಧಿಸಿ ಬಿಡುಗಡೆ ಮಾಡಲು ಬೆಂಗಳೂರು ಪೊಲೀಸರಿಗೆ ಹೈಕೋರ್ಟ್ ಅನುಮತಿ ನೀಡಿದೆ. ಈ ಸಂಬಂಧ ಸಲ್ಲಿಕೆಯಾಗಿದ್ದ ಅರ್ಜಿ ವಿಚಾರಣೆ ನಡೆಸಿದ ಮುಖ್ಯ ನ್ಯಾ. ಎ.ಎಸ್.ಓಕಾ ನೇತೃತ್ವದ ವಿಭಾಗೀಯ ನ್ಯಾಯಪೀಠ ಈ ಅನುಮತಿ ನೀಡಿ ಆದೇಶಿಸಿದೆ. ಲಾಕ್‌ಡೌನ್ ಅವಧಿಯಲ್ಲಿ ಬೆಂಗಳೂರು ನಗರ ವ್ಯಾಪ್ತಿಯಲ್ಲಿ ವಶಕ್ಕೆ ಪಡೆಯಲಾಗಿರುವ ದ್ವಿಚಕ್ರ ಮತ್ತು ತ್ರಿಚಕ್ರ ವಾಹನಗಳಿಗೆ ರೂ.500 ಹಾಗೂ ನಾಲ್ಕು ಚಕ್ರದ ವಾಹನಗಳಿಗೆ ರೂ.ಸಾವಿರ ದಂಡ ವಿಧಿಸಿ ಬಿಡುಗಡೆ ಮಾಡಬೇಕು. ಲಾಕ್‌ಡೌನ್ ಆದೇಶ ಉಲ್ಲಂಘಿಸದಂತೆ ಮಾಲೀಕರಿಗೆ ಷರತ್ತು ವಿಧಿಸಿ ಮುಚ್ಚಳಿಕೆ ಬರೆಸಿಕೊಳ್ಳಬೇಕೆಂದು ನ್ಯಾಯಪೀಠ ಪೊಲೀಸರಿಗೆ ನಿರ್ದೇಶನ ನೀಡಿದೆ.

**ಎಸ್‌ಎಆರ್‌ಐ, ಐಎಲ್‌ಐ ಸಮೀಕ್ಷೆ:** ತೀವ್ರ ಉಸಿರಾಟ ತೊಂದರೆ ಹಾಗೂ ಶೀತಜ್ವರ ಮಾದರಿ ಅನಾರೋಗ್ಯ ಸಮಸ್ಯೆಗಳನ್ನು ಹೊಂದಿರುವವರಲ್ಲಿ ಕೊರೋನಾ ಸೋಂಕು ಕಾಣಿಸಿಕೊಳ್ಳುತ್ತಿರುವ ಹಿನ್ನೆಲೆಯಲ್ಲಿ ಬಿಬಿಎಂಪಿ ವ್ಯಾಪ್ತಿಯಲ್ಲಿ ಮೇ 4 ಅಥವಾ ಮೇ 5 ರಿಂದ ಮನೆ ಮನೆಗೆ ತೆರಳಿ ಭೇಟಿ ನೀಡಿ, ಈ ಮಾದರಿಯ ಸಮಸ್ಯೆ ಹೊಂದಿರುವವರ ಬಗ್ಗೆ ಸಮೀಕ್ಷೆ ನಡೆಸಲಾಗುವುದು ಎಂದು ಬಿಬಿಎಂಪಿಯ ವಿಶೇಷ ಆಯುಕ್ತ ಬಸವರಾಜ್ ತಿಳಿಸಿದ್ದಾರೆ.

ಮೇ 2 ರಿಂದ ಬಿಬಿಎಂಪಿಯ 63 ಉಪ ವಿಭಾಗದಲ್ಲಿ ಅಂಗನವಾಡಿ ಕಾರ್ಯಕರ್ತೆಯರು, ಸರ್ಕಾರಿ ಶಾಲೆ ಹಾಗೂ ಬಿಬಿಎಂಪಿ ಶಿಕ್ಷಕರು ಸೇರಿದಂತೆ ಒಟ್ಟು 17,684 ಮಂದಿಗೆ ತರಬೇತಿ ನೀಡಲಾಗುವುದು. ಬಳಿಕ ತಂಡ ರಚಿಸಿ 4 ಹಂತದಲ್ಲಿ ತರಬೇತಿ ನೀಡಲು ಉದ್ದೇಶಿಸಲಾಗಿದೆ ಎಂದು ಆಯುಕ್ತರು ತಿಳಿಸಿರುತ್ತಾರೆ.

ಆಧಾರ:ಉದಯವಾಣಿ, ದಿನಾಂಕ:01.05.2020